ಪ್ರಾಥಮಿಕ ಆರೋಗ್ಯ ಕೇಂದ್ರಗಳು

2761 (1074), ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟಿವೆ;

ಆ) ಮಾಗಡಿ ಕ್ಷೇತ್ರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಾದ ಕಟ್ಟಡ, ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು;

ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು (ವಿವರ ನೀಡುವುದು)?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ 20 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ.

ಆ) ಮಾಗಡಿ ಕ್ಷೇತ್ರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಆದರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಮತ್ತು ಈ) ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಹಾಗೂ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇತರೆ ಸಿಬ್ಬಂದಿಗಳ ಹುದ್ದೆಗಳನ್ನು ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧಪಟ್ಟ ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ,

ತದನಂತರ ಸಿಬ್ಬಂದಿಗಳ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ಹಾಗೂ ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಆಯುರ್ವೇದ ಆಸ್ಪತ್ರೆಯ ಹಸ್ತಾಂತರ

2762 (2733), ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ಪಟ್ಟಣದಲ್ಲಿ ನಿರ್ಮಿಸಿರುವ ಆಯುರ್ವೇದ ಆಸ್ಪತ್ರೆಯ ಕಟ್ಟಡವನ್ನು ಇಲಾಖೆಯ ವಶಕ್ಕೆ ಹಸ್ತಾಂತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಯಾವ ಕಾಲಮಿತಿಯಲ್ಲಿ ಹಸ್ತಾಂತರಿಸಲಾಗುವುದು, ಹಸ್ತಾಂತರಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮವೇನು;

ಆ) ಈ ಆಸ್ಪತ್ರೆಗೆ ಕೊಳವೆಬಾವಿ ಮತ್ತು ಕಾಂಪೌಂಡ್ ಗೋಡೆಯನ್ನು ನಿರ್ಮಿಸಲಾಗಿದೆಯೇ, ಕೊಳವೆ ಬಾವಿ ಮತ್ತು ಕಾಂಪೌಂಡ್ ಗೋಡೆ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ, ಎಷ್ಟು ಖರ್ಚಾಗಿದೆ, ಯಾವಾಗ ಗುತ್ತಿಗೆದಾರರಿಗೆ ಪಾವತಿ ಮಾಡಲಾಗಿದೆ, ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಈಗಾಗಲೇ ಕಟ್ಟಡ ಕಾಮಗಾರಿ ಪೂರ್ಣಗೊಂಡು ಸದರಿ ಕಟ್ಟಡದಲ್ಲಿ ಆಸ್ಪತ್ರೆಯು ಕಾರ್ಯನಿರ್ವಹಿಸುತ್ತಿದೆ.

ಆ) ಕೊಳವೆ ಬಾವಿ ಮತ್ತು ಕಾಂಪೌಂಡ್ ಕಾಮಗಾರಿಗೆ ರಾಜ್ಯವಲಯದ ಅನುದಾನದಲ್ಲಿ ₹ 14.00 ಲಕ್ಷಗಳ ಅನುದಾನವನ್ನು ಕೆ.ಹೆಚ್.ಎಸ್.ಡಿ.ಆರ್.ಪಿ. ಇವರಿಗೆ ಡಿಸೆಂಬರ್–2013ರಲ್ಲಿ ಬಿಡುಗಡೆ ಮಾಡಲಾಗಿದೆ. ಪ್ರಸ್ತುತ ಈ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ